# ಬೃಹತ್ ಮರ ಉರುಳಿ ವಾಹನ ಸಂಚಾರ ಸ್ಥಗಿತ

ಪ್ರಜಾವಾಣಿ ವಾರ್ತೆ

**ಬೆಂಗಳೂರು:** ನಗರದ ಬಳ್ಳಾರಿ ರಸ್ತೆಯ ಎನ್‌ಐಟಿ ಗೇಟ್ ಬಳಿ ಬುಧವಾರ ಬೆಳಿಗ್ಗೆ ದೊಡ್ಡ ಮರವೊಂದು ಉರುಳಿ ಬಿದ್ದ ಪರಿಣಾಮ ಅರ್ಧ ಗಂಟೆಗೂ ಹೆಚ್ಚು ಕಾಲ ವಾಹನ ಸಂಚಾರ ಸ್ಥಗಿತಗೊಂಡಿತ್ತು.

ಇದರಿಂದಾಗಿ ಬೆಂಗಳೂರು ಅಂತರ ರಾಷ್ಟ್ರೀಯ ವಿಮಾನ ನಿಲ್ದಾಣ, ಭಾಷ್ಯಂ ವೃತ್ತ, ಬಳ್ಳಾರಿ ರಸ್ತೆ ಮತ್ತಿತರ ಪ್ರದೇಶಗಳಿಗೆ ಹೋಗಬೇಕಿದ್ದ ಜನರು ತೊಂದರೆ ಅನುಭವಿಸಿದರು.

ಸ್ಥಳಕ್ಕೆ ಬಂದ ಸಂಚಾರ ಪೊಲೀಸರು ಹಾಗೂ ಬಿಬಿಎಂಪಿ ಸಿಬ್ಬಂದಿ ಮರವನ್ನು ಕತ್ತರಿಸಿ ಸಾಗಿಸುವ ಮೂಲಕ ಸುಗಮ ಸಂಚಾರಕ್ಕೆ ಅವಕಾಶ ಮಾಡಿಕೊಟ್ಟರು.

ಬೆಳಿಗ್ಗೆ 8.45ಕ್ಕೆ ಮರ ಇದ್ದಕ್ಕಿದ್ದಂತೆ ಉರುಳಿ ಬಿತ್ತು. ಮರವನ್ನು ಕತ್ತರಿಸಿ 9.15ರ ವೇಳೆಗೆ ಸುಗಮ ಸಂಚಾರಕ್ಕೆ ಅವಕಾಶ ಮಾಡಿಕೊಡಲಾಯಿತು ಎಂದು ಸದಾಶಿವನಗರ ಸಂಚಾರ ಪೊಲೀಸರು ತಿಳಿಸಿದ್ದಾರೆ.

# ನಾಳೆಯಿಂದ ‘ಸೋಕೇರ್’ ದಶಮಾನೋತ್ಸವ

ಪ್ರಜಾವಾಣಿ ವಾರ್ತೆ

**ಬೆಂಗಳೂರು:** ‘ಸೋಕೇರ್’ ಸಂಸ್ಥೆಯು ಇದೇ 26 ಮತ್ತು 27ರಂದು ಪಂಪ ಮಹಾಕವಿ ರಸ್ತೆಯಲ್ಲಿರುವ ವಿದ್ಯ ವಿಹಾರ್ ಸಭಾಂಗಣದಲ್ಲಿ ದಶಮಾನೋತ್ಸವ ಕಾರ್ಯಕ್ರಮ ಹಮ್ಮಿಕೊಂಡಿದೆ ಎಂದು ಸಂಸ್ಥೆಯ ಸಲಹೆಗಾರ, ನಿವೃತ್ತ ಪೊಲೀಸ್ ಅಧಿಕಾರಿ ಎಲ್.ರೇವಣ್ಣಸಿದ್ದಯ್ಯ ಬುಧವಾರ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.

ರಾಜ್ಯದ ಬಂಧೀಖಾನೆಗಳಲ್ಲಿ ಶಿಕ್ಷೆ ಅನುಭವಿಸುತ್ತಿರುವವರ ಮಕ್ಕಳಿಗೆ ಶಿಕ್ಷಣ ನೀಡುವ ಕೆಲಸದಲ್ಲಿ ‘ಸೋಕೇರ್’ ತೊಡಗಿದೆ. ಸಂಸ್ಥೆಯಲ್ಲಿ 136 ಮಕ್ಕಳಿಗೆ ಉಚಿತ ಶಿಕ್ಷಣ, ವಸತಿ ಸೌಲಭ್ಯ ನೀಡಲಾಗುತ್ತಿದೆ ಎಂದರು.

26ರಂದು ಮಧ್ಯಾಹ್ನ 3.30ಕ್ಕೆ ಗೃಹ ಸಚಿವ ವಿ.ಎಸ್.ಆಚಾರ್ಯ ದಶಮಾನೋತ್ಸವ ಕಾರ್ಯಕ್ರಮ ಉದ್ಘಾಟಿಸುವರು. ಹೈಕೋರ್ಟ್ ನ್ಯಾಯಮೂರ್ತಿ ಎನ್.ಕುಮಾರ್, ಸಂಸ್ಥೆಯ ಸಲಹೆಗಾರ ಎಲ್.ರೇವಣ್ಣಸಿದ್ದಯ್ಯ ಅತಿಥಿಗಳಾಗಿ ಭಾಗವಹಿಸುವರು. ಶೃಂಗೇರಿ ಶಾರದಾ ಪೀಠದ ಆಡಳಿತಾಧಿಕಾರಿ ವಿ.ಆರ್.ಗೌರಿಶಂಕರ್ ಅಧ್ಯಕ್ಷತೆ ವಹಿಸುವರು ಎಂದರು.

27ರಂದು ಸಮಾರೋಪ ಸಮಾರಂಭ ನಡೆಯಲಿದ್ದು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಕಾರ್ಯದರ್ಶಿ ಡಿ.ಸಿ.ಅಶ್ವಥ್, ಶಾಸಕರಾದ ವಿಜಯಕುಮಾರ್, ಶಾಸಕ ರವಿಸುಬ್ರಹ್ಮಣ್ಯ ಹಾಗೂ ಇತರರು ಭಾಗವಹಿಸುವರು ಎಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಸಂಸ್ಥೆಯ ಸಂಸ್ಥಾಪಕ ವೆಂಕಟಾ ರಾಘವಾಚಾರಿ ಮಣಿ, ಅಧ್ಯಕ್ಷ ರಮೇಶ್ ಇದ್ದರು.



ಬೆಂಗಳೂರಿನ ಎಲೆಕ್ಟ್ರಾನಿಕ್ ಸಿಟಿಯಲ್ಲಿರುವ ‘ಐ.ಎಫ್.ಐ.ಎಂ. ಬ್ಯುಸಿನೆಸ್ ಸ್ಕೂಲ್’ನಲ್ಲಿ ಬುಧವಾರ ಹಮ್ಮಿಕೊಂಡಿದ್ದ ಹದಿಮೂರನೇ ಘಟಿಕೋತ್ಸವದಲ್ಲಿ ನಿವೃತ್ತ ಪೊಲೀಸ್ ಅಧಿಕಾರಿ ಕಿರಣ್ ಬೇಡಿ ಅವರು ಪದವೀಧರರಿಗೆ ಶುಭ ಹಾರೈಸಿದರು. –ಪ್ರಜಾವಾಣಿ ವಾರ್ತೆ